**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 49/2024**

**ಚಾ.ಸಾ. :- 18**
**ಪ್ರಾ.ಸಾ. :- 05**

| | | |
|---|---|---|
| ಹೆಸರು | : | ಬಿ.ಜಿ.ಕುಮಾರ್ |
| ತಂದೆಯ ಹೆಸರು | : | ಗೋವಿಂದಶೆಟ್ಟಿ |
| ವಯಸ್ಸು | : | 47 ವರ್ಷ |
| ಉದ್ಯೋಗ | : | ಪಿ.ಐ., ಶ್ರೀ.ಟೌ.ಪೊ.ಠಾಣೆ |
| ವಾಸಸ್ಥಳ | : | ಶ್ರೀರಂಗಪಟ್ಟಣ. |

---

**ಪ್ರಮಾಣೀಕರಿಸಲಾದ ದಿನಾಂಕಃ- 23.03.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು ಮೇ-2022 ರಿಂದ ಏಪ್ರಿಲ್-2025 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪಿ.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 21.01.2024 ರಂದು ನಾನು ಠಾಣೆಯಲ್ಲಿ ಕರ್ತವ್ಯದಲ್ಲಿದ್ದಾಗ ಚಾ.ಸಾ-1 ರವರು ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಪ್ರಕರಣವನ್ನು ದಾಖಲು ಮಾಡಿಕೊಂಡು, ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-9 ಎಂದು ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ಪಂಚರ ಸಮಕ್ಷಮ ಮೃತರ ಶವಪಂಚನಾಮೆಯನ್ನು ಜರುಗಿಸಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ. ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ಫೋಟೋಗಳನ್ನು ಪಂಚನಾಮೆಯ ಸಮಯದಲ್ಲಿ ತೆಗೆಯಿಸಿರುತ್ತೇನೆ. ಮೃತರ ಮರಣೋತ್ತರ ಪರೀಕ್ಷೆಯನ್ನು ಮಾಡುವಂತೆ ಮನವಿ ಸಲ್ಲಿಸಿರುತ್ತೇನೆ.

ನಂತರ ಕೃತ್ಯ ಸ್ಥಳಕ್ಕೆ ಹೋಗಿ ಪಂಚರ ಸಮಕ್ಷಮದಲ್ಲಿ ಕೃತ್ಯ ಸ್ಥಳದ ಮಹಜರನ್ನು ತಯಾರು ಮಾಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತೇನೆ ಹಾಗೂ ಅಪಘಾತ ಸ್ಥಳದ ಫೋಟೋಗಳನ್ನು ತೆಗೆಯಿಸಿರುತ್ತೇನೆ. ಅಪಘಾತ ಸ್ಥಳದ 1 ಫೋಟೋವನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದೆ.

ಅದೇ ದಿನ ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನಗಳನ್ನು ಪಂಚರ ಸಮಕ್ಷಮ ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-7 ಎಂದು ಗುರುತಿಸಲಾಗಿದೆ. ಸದರಿ ಬಸ್ಸಿನ 4 ಫೋಟೋಗಳನ್ನು ಈಗ ನೋಡುತ್ತಿದ್ದು ಅದನ್ನು ಒಟ್ಟಾಗಿ ನಿಪಿ-10 ಎಂದು ಗುರುತಿಸಲಾಯಿತು. ಸದರಿ ದ್ವಿಚಕ್ರ ವಾಹನದ 4 ಫೋಟೋಗಳನ್ನು ಈಗ ನೋಡುತ್ತಿದ್ದು ಅದನ್ನು ಒಟ್ಟಾಗಿ ನಿಪಿ-11 ಎಂದು ಗುರುತಿಸಲಾಯಿತು.

ಅಪಘಾತಕ್ಕೆ ಸಂಬಂಧಿಸಿದಂತೆ ಎರಡೂ ವಾಹನಗಳನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸುವಂತೆ ಆರ್.ಟಿ.ಓ.ರವರಿಗೆ ಮನವಿ ಸಲ್ಲಿಸಿ, ನಂತರದಲ್ಲಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಐ.ಎಂ.ವಿ.ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-6 ಎಂದು ಗುರುತಿಸಲಾಗಿದೆ.

ನಂತರ ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-12 ಮತ್ತು 13 ಎಂದು ಗುರುತಿಸಲಾಯಿತು. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದೆ.

ಆರೋಪಿ ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿ ಬಾಂಡ್ ಪಡೆದು ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಿರುತ್ತೇನೆ.

ತನಿಖಾ ಸಮಯದಲ್ಲಿ ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ.

ನಂತರ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ದೂರು ಪಡೆಯುವುದಕ್ಕೂ ಮುಂಚೆ ಅಪಘಾತದ ಬಗ್ಗೆ ಸಾರ್ವಜನಿಕರಿಂದ ಮಾಹಿತಿ ಬಂದಿದ್ದು, ರಸ್ತೆಯಲ್ಲಿ ವಾಹನ ದಟ್ಟಣೆಯಾಗಿರುತ್ತದೆ ಎಂದು ಮಾಹಿತಿ ಬಂದ ಕಾರಣ ಸ್ಥಳಕ್ಕೆ ಹೋಗಿರುತ್ತೇವೆ. ಆ ಸಮಯದಲ್ಲಿ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಅದೇ ದಿನ ಮಹಜರ್ ಮಾಡಲು ತೊಂದರೆ ಇತ್ತೇ ಎಂದರೆ ಸಾಕ್ಷಿ ಬೇರೆ ಪ್ರಕರಣಗಳು ಸಹ ಇದ್ದುದರಿಂದ ಸಮಯ ಆಗಿರುವುದಿಲ್ಲ. ಕಚ್ಚಾ ನಕಾಶೆ ಪ್ರಕಾರ ಮೃತರೇ ಅಜಾಗರೂಕತೆಯಿಂದ ವಾಹನ ಚಾಲನೆ ಮಾಡಿದ್ದರಿಂದ ಅಪಘಾತ ಆಗಿರುತ್ತದೆ ಎಂದರೆ ಸುಳ್ಳು. ಮೃತ ವ್ಯಕ್ತಿಯ ಗ್ರಾಮದವರನ್ನು ಮಾತ್ರ ಸಾಕ್ಷಿದಾರರನ್ನಾಗಿ ಮಾಡಿದ್ದು, ಅಪಘಾತ ಸ್ಥಳದ ಗ್ರಾಮದವರನ್ನು ಸಾಕ್ಷಿದಾರರನ್ನಾಗಿ ಮಾಡಿಲ್ಲ ಎಂದರೆ ಸರಿಯಲ್ಲ. ಮಹಜರಿನಲ್ಲಿ ನಮೂದು ಮಾಡಿರುವ ಟೀ ಸ್ಟಾಲ್ ನಲ್ಲಿ ಕೆಲಸ ಮಾಡುವವರನ್ನು ಸಾಕ್ಷಿದಾರರನ್ನಾಗಿ ಮಾಡಿಲ್ಲ ಎಂದರೆ ಸರಿ. ಐ.ಎಂ.ವಿ.ವರದಿಯಲ್ಲಿ ದ್ವಿಚಕ್ರ ವಾಹನಕ್ಕೆ ಹಿಂಭಾಗದಿಂದ ಡಿಕ್ಕಿಪಡಿಸಿದಾಗ ಆಗುವ ಜಖಂ ತೋರಿಸಿರುವುದಿಲ್ಲ ಎಂದರೆ ಸರಿಯಲ್ಲ.

ಆರೋಪಿ ತಪ್ಪಿನಿಂದ ಅಪಘಾತವಾಗದೇ ಇದ್ದರೂ ದೂರುದಾರರ ಕುಟುಂಬಕ್ಕೆ ಸಹಾಯ ಮಾಡಲು ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ.

ನಾನು ಸ್ಥಳಕ್ಕೆ ಭೇಟಿ ಕೊಟ್ಟಿಲ್ಲ ಹಾಗೂ ಪ್ರಕರಣಕ್ಕೆ ಅನುಕೂಲವಾಗುವಂತೆ ಸ್ಥಳ ಮಹಜರ್, ಕಚ್ಚಾ ನಕಾಶೆ ತಯಾರು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ

ಹೇಳಿಕೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ.

ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಮೃತರಿಗೆ ದ್ವಿಚಕ್ರ ವಾಹನ ಚಾಲನೆ ಮಾಡಲು ಪರವಾನಗಿ ಇರಲಿಲ್ಲ ಎಂದರೆ ಸರಿ. ಸದರಿಯವರಿಗೆ ವಾಹನ ಚಾಲನೆ ಮಾಡಲು ಬರುತ್ತಿರಲಿಲ್ಲ, ಹಾಗಾಗಿ ಅವರ ಅಜಾಗರೂಕತೆ ಹಾಗೂ ನಿರ್ಲಕ್ಷ್ಯತನದಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಮೃತರ ಚಾಲನಾ ಪರವಾನಗಿಯನ್ನು ಹಾಗೂ ಸದರಿ ವಾಹನದ ವಿಮೆಯನ್ನು ಅಂತಿಮ ವರದಿಯಲ್ಲಿ ಹಾಜರುಪಡಿಸಿಲ್ಲ ಎಂದರೆ ಸರಿ. ಸದರಿ ಚಾಲಕನ ವಿರುದ್ಧ ಹಾಗೂ ವಾಹನದ ವಿರುದ್ಧ ಅಂತಿಮ ವರದಿ ಸಲ್ಲಿಸಿಲ್ಲ ಎಂದರೆ ಸರಿ.

ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ :-</u> ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**